# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಮುಖ್ಯ ಆಯುಕ್ತರು ರವರ ಕೇಂದ್ರ ಕಛೇರಿ, ಎನ್.ಆರ್.ವೃತ್ತ ಬೆಂಗಳೂರು-02.

ಸಂಖ್ಯೆ: ಮು.ಆ./ಪಿ.ಆರ್/ (G)2142 /2023-24. ದಿನಾಂಕ: 21/11/23.

## ಸುತ್ತೋಲೆ

ವಿಷಯ: ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಎಲ್ಲಾ ವಲಯಗಳ ಅಧಿಕಾರಿ/ಸಿಬ್ಬಂದಿಗಳು ಮೊಬೈಲ್ ಆಪ್ ಬಯೋಮೇಟ್ರಿಕ್ ಮುಖಾಂತರ ಹಾಜರಾತಿ ಪಡೆಯುವ ಬಗ್ಗೆ.

******************

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಕೇಂದ್ರ ಕಛೇರಿ ಹಾಗೂ ಎಲ್ಲಾ 08-ವಲಯ ಕಛೇರಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಅಧಿಕಾರಿ/ಸಿಬ್ಬಂದಿಗಳು ಕಛೇರಿ ಕೆಲಸಕ್ಕೆ ನಿಗದಿತ ಸಮಯಕ್ಕೆ ಹಾಜರಾಗಿ ಕರ್ತವ್ಯ ನಿರ್ವಹಿಸಬೇಕಾಗಿರುತ್ತದೆ, ಆದರೆ ಕೆಲವೊಂದು ಕಛೇರಿಗಳಲ್ಲಿ ಅಧಿಕಾರಿ/ಸಿಬ್ಬಂದಿಗಳು ನಿಗದಿತ ಸಮಯದಲ್ಲಿ ಕಛೇರಿಯಲ್ಲಿ ಹಾಜರಿಲ್ಲದೆ ಇರುವುದನ್ನು ಗಮನಿಸಲಾಗಿರುತ್ತದೆ. ಆದ್ದರಿಂದ ಇನ್ನು ಮುಂದೆ ಕಡ್ಡಾಯವಾಗಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಕೇಂದ್ರ ಕಛೇರಿ ಹಾಗೂ ಎಲ್ಲಾ ವಲಯಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಅಧಿಕಾರಿ/ಸಿಬ್ಬಂದಿಗಳ ಮೊಬೈಲ್ ಆಪ್ ಬಯೋಮೇಟ್ರಿಕ್ ಮುಖಾಂತರ ಹಾಜರಾತಿಯನ್ನು ಪಡೆಯಲು ಈ ಕೆಳಕಂಡಂತೆ ಕ್ರಮವಹಿಸಲು ಈ ಮೂಲಕ ಆದೇಶಿಸಿದೆ.

1. ಪಾಲಿಕೆಯ ಕೇಂದ್ರ ಕಛೇರಿ ಹಾಗೂ ಎಲ್ಲಾ ವಲಯಗಳ ಅಧಿಕಾರಿ/ಸಿಬ್ಬಂದಿಗಳು Logsafe ಸಂಸ್ಥೆಯವರ ಅಭಿವೃದ್ಧಿ ಪಡಿಸಿರುವ ಮೊಬೈಲ್ ಆಪ್‌ನಲ್ಲಿ ಲಾಗಿನ್ ಮಾಡಿಕೊಳ್ಳುವುದು.
2. ಪಾಲಿಕೆಯ ಕೇಂದ್ರ ಹಾಗೂ ಎಲ್ಲಾ ವಲಯಗಳ ಅಧಿಕಾರಿ/ಸಿಬ್ಬಂದಿಗಳು ನಿಗಧಿತ ಸಮಯ ಬೆಳಿಗ್ಗೆ 10:00ರೊಳಗೆ ಕರ್ತವ್ಯಕ್ಕೆ ಹಾಜರಾಗಿ ಮೊಬೈಲ್ ಆಪ್‌ನಲ್ಲಿ ಲಾಗಿನ್ ಮಾಡಿಕೊಂಡು ಹಾಜರಾತಿಯನ್ನು ದೃಢೀಕರಿಸಿ ಕಛೇರಿಯಲ್ಲಿ ಕಾರ್ಯನಿರ್ವಹಿಸುವುದು.
3. ಈಗಾಗಲೇ ಲಾಗಿನ್ ಐಡಿಗಳನ್ನು ವಲಯ ಆಯುಕ್ತರುಗಳಿಗೆ ಹಸ್ತಾಂತರಿಸಿದ್ದು, ವಲಯ ಮಟ್ಟದಲ್ಲಿ ಕಾರ್ಯನಿರ್ವಹಿಸಲಾಗುತ್ತಿರುವ, Field Visit, Inspection ಲಾಗಿನ್ ಹಾಗೂ ಲಾಗ್ ಔಟ್ ಸಮಯವನ್ನು ವಲಯ ಆಯುಕ್ತರು ನಿರ್ಧರಿಸಿ ಮೊಬೈಲ್ ಆಪ್ ಮುಖಾಂತರ ಹಾಜರಾತಿಯನ್ನು ಪರಿಗಣಿಸತಕ್ಕದ್ದು.
4. ಕಛೇರಿ ಅವಧಿಯ ಮುಕ್ತಾಯ ಸಂಜೆ 05:30ರ ನಂತರ ಮೊಬೈಲ್ ಆಪ್‌ನಲ್ಲಿ ಲಾಗ್ ಔಟ್ ಮಾಡಿಕೊಂಡು ಹಾಜರಾತಿಯನ್ನು ದೃಢೀಕರಿಸುವುದು ಕಛೇರಿ ಅವಧಿ ಮುಕ್ತಾಯ ಮುಂಚಿತವಾಗಿ ಮೊಬೈಲ್ ಆಪ್‌ನಲ್ಲಿ ಲಾಗ್ ಔಟ್ ಮಾಡಿರುವುದನ್ನು ಪರಿಗಣಿಸಬಾರದು.
5. ಪಾಲಿಕೆಯ ಕೇಂದ್ರ ಕಛೇರಿ ಹಾಗೂ ಎಲ್ಲಾ ವಲಯದ ಕಛೇರಿಗಳ ಮುಖ್ಯಸ್ಥರುಗಳು ಅಧಿಕಾರಿ/ಸಿಬ್ಬಂದಿಗಳು ಹಾಜರಾತಿಯನ್ನು ಮೊಬೈಲ್ ಆಪ್ ಬಯೋಮೇಟ್ರಿಕ್ ಮುಖಾಂತರ ಹಾಜರಾತಿ ಸಲ್ಲಿಸುತ್ತಿರುವ ಬಗ್ಗೆ ದೃಢೀಕರಿಸಿಕೊಂಡು ವೇತನವನ್ನು ಪಾವತಿಸಲು ಕ್ರಮವಹಿಸುವುದು.
6. ಕೇಂದ್ರ ಕಛೇರಿ ಹಾಗೂ ಎಲ್ಲಾ ವಲಯಗಳ ಅಧಿಕಾರಿ/ಸಿಬ್ಬಂದಿಗಳ ಸಾಂಧರ್ಭಿಕ ರಜೆಯನ್ನು ಪಡೆಯಲು ಹಾಜರಾತಿ ಪಡೆಯುವ ಮೊಬೈಲ್ ಆಪ್‌ನಲ್ಲಿ ಮುಖಾಂತರ ದೃಢೀಕರಿಸಿ ರಜೆಯನ್ನು ಪಡೆದುಕೊಳ್ಳತಕ್ಕದ್ದು.

ಉಪ ಮುಖ್ಯ ಮಾಹಿತಿ ಅಧಿಕಾರಿ (ಸಾರ್ವಜನಿಕ ಸಂಪರ್ಕ) ರವರ ಕಛೇರಿ ಸಂಖ್ಯೆ: 914 ದಿನಾಂಕ: 21/11/23 ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಎನ್.ಆರ್.ಚೌಕ, ಬೆಂಗಳೂರು

SDA upload in website 21/11/2023

DEPUTY CHIEF INFORMATION OFFICER BRUHAT BENGALURU MAHANAGARA PALIKE

ಮು.ತಿ.ನೋ....

7. ಮೇಲ್ಕಂಡ ಆದೇಶದಂತೆ ಪಾಲಿಕೆಯ ಎಲ್ಲಾ ವಲಯಗಳ ಬಟವಾಡೆ ಅಧಿಕಾರಿಗಳು / ಇಲಾಖಾ ಮುಖ್ಯಸ್ಥರು. ವಲಯ ಆಯುಕ್ತರು ರವರುಗಳು ಅಗತ್ಯ ಕ್ರಮ ಕೈಗೊಳ್ಳುವುದು.

ಮುಂದುವರೆದಂತೆ ಪಾಲಿಕೆಯ ಕೇಂದ್ರ ಕಛೇರಿ ಹಾಗೂ ಎಲ್ಲಾ ಅಧಿಕಾರಿ/ಸಿಬ್ಬಂದಿಗಳು ಮೇಲ್ಕಂಡ ಆದೇಶದಂತೆ ಶಿಸ್ತು ಪಾಲಿಸುತ್ತಿರುವ ಬಗ್ಗೆ ಸಂಬಂಧ ಪಟ್ಟ ವಲಯ ಆಯುಕ್ತರು/ವಿಶೇಷ ಆಯುಕ್ತರುಗಳು ಮೇಲುಸ್ತುವಾರಿಯನ್ನು ವಹಿಸಲು ಆದೇಶಿಸಿದೆ.

ಮುಖ್ಯ ಆಯುಕ್ತರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಪ್ರತಿಯನ್ನು:-**

1. ಮಾನ್ಯ ಆಡಳಿತಗಾರರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಸಲ್ಲಿಸಿದೆ.
2. ವಿಶೇಷ ಆಯುಕ್ತರು (ಆಡಳಿತ/ಯೋಜನೆ)ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಸಲ್ಲಿಸಿದೆ.
3. ಎಲ್ಲಾ ವಲಯ ಆಯುಕ್ತರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಸಲ್ಲಿಸಿದೆ.
4. ಎಲ್ಲಾ ವಲಯ ಅಪರ/ಜಂಟಿ ಆಯುಕ್ತರುಗಳಿಗೆ ಸೂಕ್ತ ಕ್ರಮಕ್ಕಾಗಿ.
5. ಎಲ್ಲಾ ವಲಯ ಬಟವಾಡೆ ಅಧಿಕಾರಿಗಳಿಗೆ ಮಾಹಿತಿಗಾಗಿ ಕಳುಹಿಸಿದೆ.
6. ಎಲ್ಲಾ ವಲಯ ಇಲಾಖಾ ಮುಖ್ಯಸ್ಥರಿಗೆ ಸೂಕ್ತ ಕ್ರಮಕ್ಕಾಗಿ.
7. ಕಛೇರಿ ಪ್ರತಿ.